# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 85 |
| ಸದಸ್ಯರ ಹೆಸರು | : | ಶ್ರೀ ಅರವಿಂದ ಕುಮಾರ ಅರಳಿ |
| ಉತ್ತರಿಸುವ ದಿನಾಂಕ | : | 07.12.2020 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು. |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; ಅದರಲ್ಲಿ ಭರ್ತಿ ಮಾಡಲಾಗಿರುವ ಮತ್ತು ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ಮಾಹಿತಿ ಒದಗಿಸುವುದು) | ಸಮಾಜ ಕಲ್ಯಾಣ ಇಲಾಖೆಯಲ್ಲಿ ಬೀದರ್ ಜಿಲ್ಲೆಗೆ ಒಟ್ಟು – 456 ಹುದ್ದೆಗಳು ಮಂಜೂರಾಗಿರುತ್ತವೆ. ವಿವರ ಈ ಕೆಳಕಂಡಂತಿದೆ. (ಕೆಳಗಿನ ಕೋಷ್ಟಕ) |
| ಆ) | ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವುದು ಯಾವಾಗ? | ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಕುರಿತಂತೆ ಈ ಕೆಳಕಂಡಂತೆ ಕ್ರಮ ವಹಿಸಲಾಗಿದೆ.<br><br>ಸಮಾಜ ಕಲ್ಯಾಣ ಇಲಾಖೆಯು ರಾಜ್ಯ ವ್ಯಾಪ್ತಿ ಹೊಂದಿದ್ದು, ಕಲ್ಯಾಣ ಕರ್ನಾಟಕ ಭಾಗದ 06 ಜಿಲ್ಲೆಗಳಿಗೆ ಸಂಬಂಧಿಸಿದಂತೆ ನೇರ ನೇಮಕಾತಿ ಮುಂಬಡ್ತಿ ಕೋಟಾದಡಿ ಲಭ್ಯವಿರುವ ಗ್ರೂಪ್-ಸಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗಿದೆ. ಗ್ರೂಪ್ ಎ & ಬಿ ವೃಂದಕ್ಕೆ ಸಂಬಂಧಿಸಿದಂತೆ ವೃಂದ ಮತ್ತು ನೇಮಕಾತಿ ನಿಯಮಗಳ ಸಮಗ್ರ ತಿದ್ದುಪಡಿ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ತಿದ್ದುಪಡಿಯಾದ ನಂತರ ಈ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲಾಗುವುದು.<br><br>ಗ್ರೂಪ್ "ಡಿ" ಖಾಯಂ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅವಕಾಶವಿರುವುದಿಲ್ಲ. ಖಾಲಿ ಇರುವ ಹುದ್ದೆಗಳಿಗೆ ಅನುಗುಣವಾಗಿ ಹೊರಸಂಪನ್ಮೂಲ ಮುಖೇನ ಸಿಬ್ಬಂದಿ ಸೇವೆ ಪಡೆದು ವಿದ್ಯಾರ್ಥಿನಿಲಯಗಳನ್ನು ನಿರ್ವಹಣೆ ಮಾಡಲಾಗುತ್ತಿದೆ. |

| ಕ್ರ.ಸಂ. | ವೃಂದ | ಮಂಜೂರಾತಿ | ಭರ್ತಿ | ಖಾಲಿ |
|---|---|---|---|---|
| 1 | ಎ | 05 | 04 | 01 |
| 2 | ಬಿ | 02 | 01 | 01 |
| 3 | ಸಿ | 139 | 73 | 66 |
| 4 | ಡಿ | 310 | 126 | 184 |
| | ಒಟ್ಟು | 456 | 204 | 252 |

ಸಕಇ 419 ಎಸ್‌ಎಲ್‌ಪಿ 2020

( ಬಿ.ಶ್ರೀರಾಮುಲು )
ಸಮಾಜ ಕಲ್ಯಾಣ ಸಚಿವರು